# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42

ಸಂಖ್ಯೆ:ಸ.ಇಂ/ವಾ-92/ವಾರ್ಡ್‌ಸಭೆ/20 /2020-21 ದಿನಾಂಕ: 08-10-2021

## ZOOM MEETING

## ವಾರ್ಡ್-92 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 08-10-2021 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-92-ಶಿವಾಜಿನಗರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ಖಾಜಿ ನಫೀಜಾ ವಾರ್ಡ್-92 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀಮತಿ. ಖಾಜಿ ನಫೀಜಾ | ನೋಡಲ್ ಅಧಿಕಾರಿ ಮತ್ತು ಸಹಾಯಕ ಆಯುಕ್ತರು(ಬಿಬಿಎಂಪಿ) |
| 2 | ಶ್ರೀ. ಶ್ರೀ.ನವೀನ್ | ಆರೋಗ್ಯ ವೈದ್ಯಾಧಿಕಾರಿ, ಶಿವಾಜಿನಗರ ವಲಯ |
| 3 | ಶ್ರೀ. ಜ್ಯೋತಿಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 4 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:92(ಪ್ರಭಾರ) |
| 5 | ಶ್ರೀ ತ್ಯಾಗರಾಜ್, | ಕಂದಾಯ ಪರಿವೀಕ್ಷಕರು |
| 6 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ(ಪ್ರಭಾರ) |
| 7 | ಶ್ರೀ.ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 8 | ಶ್ರೀ.ಲಾವಣ್ಯ ಬಾಯ್, | ಕಂದಾಯ ವಸೂಲಿಗಾರರು |
| 9 | ಶ್ರೀ.ವೆಂಕಟೇಶ್, | ಹಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರ ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:92ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈಧ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ಈ ಕೆಳಕಂಡಂತೆ ವಿವರಗಳನ್ನು ನೀಡಿದರು.

- ಮಾಸ್ಕ್ ದರಿಸದೇ ಸಾರ್ವಜನಿಕವಾಗಿ ಒಡಾಡುವವರಿಗೆ ಕಡ್ಡಾಯವಾಗಿ ನಿಯಮಾವಳಿಗಳನ್ವಯ ದಂಡ ವಿಧಿಸುವುದು & ಮಾಸ್ಕ್ ಧರಿಸುವಂತೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವಂತೆ ಮನವೊಲಿಸುವ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

- ನೋಡಲ್ ಅಧಿಕಾರಿ ಮಾತಾನಾಡುತ್ತ ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಕ್ಸೀನೇಷನ್ ಅನ್ನು ಸಾರ್ವಜನಿಕರಿಗೆ ನೀಡಲು ಸೂಚಿಸಿರುತ್ತಾರೆ.
- ನೋಡಲು ಅಧಿಕಾರಿರವರು ಮಾತನಾಡಿ, ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಕ್ರಿಮಿಟೋರಿಯಂ ಸ್ಥಳದ ಜೊತೆಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸ್ಥಳಗಳಾದ ಪೊಲೀಸ್ ಠಾಣೆ ಹತ್ತಿರ, ತರಕಾರಿ ಅಂಗಡಿಗಳ ಸಮೀಪ, ಪೇಟೆ ಬೀದಿಗಳಂತಹ ಸ್ಥಳಗಳಲ್ಲಿ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಹೆಚ್ಚಿನ ಪರೀಕ್ಷೆ ನಡೆಸುವಂತೆ ಸೂಚಿಸಿದರು.

- ನೋಡಲು ಅಧಿಕಾರಿರವರು ಮಳೆಯು ಹೆಚ್ಚಾಗಿದ್ದು, ಇದರ ಬಗ್ಗೆ ರಾತ್ರಿ ನಿಯಂತ್ರಣ ಕೊಠಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಮುಂಜಾಗ್ರತೆಯಿಂದ ಅವಶ್ಯವಿರುವ ಎಲ್ಲಾ ವಸ್ತುಗಳೊಂದಿಗೆ ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಕ್ರಮವಹಿಸಲು ಸೂಚಿಸಿರುತ್ತಾರೆ.

- ವಾರ್ಡ್ ಸಂಖ್ಯೆ; 92 ರಲ್ಲಿ ಮಳೆಯ ಅಭಾವದಿಂದ ಮರಗಳು ಬಿದ್ದು ಬೀದಿಕಂಬಗಳು ಮತ್ತು ವಾಹನ ಸಂಚಾರಕ್ಕೆ ಅಡ್ಡಿಯಾಗುವುದು ಮತ್ತು ಸಾರ್ವಜನಿಕರು ಓಡಾಡುವಾಗ ಪ್ರಾಣ ಹಾನಿಯಾಗುವ ಸಂಭವ ಹೆಚ್ಚಿರುವುದರಿಂದ ಮರಗಳ ರೆಂಬೆ ಕೊಂಬೆಗಳನ್ನು ಕಡಿಯಲು ಮತ್ತು ಹಾಕಿಸಲು ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಮುಂದಿನ ಕ್ರಮ ತೆಗೆದುಕೊಳ್ಳಲು ಬೆಸ್ಕಾಂ ರವರಿಗೆ ಸೂಚಿಸಿರುತ್ತಾರೆ.

- ವಾರ್ಡ್‌ನಲ್ಲಿ ವಿವಿಧ ಕಲ್ಯಾಣ ಕಾರ್ಯಕ್ರಮದ ಅಡಿಯಲ್ಲಿ ಅರ್ಹ ಫಲಾನುಭವಿಗಳಿಂದ ಆಹ್ವಾನಿಸಲಾಗಿರುವ ಮನೆ ನಿರ್ಮಾಣಕ್ಕಾಗಿ, ಹೊಲಿಗೆಯಂತ್ರ, ಕಂಪ್ಯೂಟರ್ ಲ್ಯಾಪ್‌ಟಾಪ್ ಹಾಗೂ ಇತರೆ ಸೌಲಭ್ಯಕ್ಕಾಗಿ ಬಂದಿರುವ ಅರ್ಜಿಗಳಲ್ಲಿ ಕೂಡಲೇ ಪರಿಶೀಲಿಸಿ ಪಲಾನುಭವಿಗಳನ್ನು ಆಯ್ಕೆ ಮಾಡಲು, ಸದರಿ ಪಲಾನುಭವಿಗಳಿಗೆ ತ್ವರಿತವಾಗಿ ಅನುದಾನವನ್ನು ಬಿಡುಗಡೆ ಮಾಡಲು ಸೂಕ್ತ ಕ್ರಮ ವಹಿಸಲು ಸೂಚಿಸಿರುತ್ತಾರೆ. ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ತಿಳಿಸಿರುತ್ತಾರೆ.

- ವಾರ್ಡ್‌ನಲ್ಲಿ ಬೀದಿ-ಬದಿಯ ವ್ಯಾಪಾರಿಗಳು ರಸ್ತೆಯ ಪಾದಚಾರಿಯ ಮಾರ್ಗದಲ್ಲಿ ವ್ಯಾಪಾರ ವಹಿವಾಟು ನಡೆಸಿರುತ್ತಾರೆ. ಇದರಿಂದ ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು, ವಯೋವೃದ್ಧರು ಅಂಗವಿಕಲರು, ಸುಲಲಿತವಾಗಿ ಓಡಾಡಲು ಕಷ್ಟಸಾಧ್ಯವಾಗಿರುತ್ತದೆ. ಆದ್ದರಿಂದ ಸದರಿ ವ್ಯಾಪಾರಸ್ಥರಿಗೆ ಸ್ಥಳಾಂತರ ಮಾಡಲು ಬಿ.ಬಿ.ಎಂ.ಪಿ. ಪೋಲೀಸ್ ಹಾಗೂ ಸಂಚಾರಿ ಪೋಲೀಸ್ ಇಲಾಖೆಯ ಅಧಿಕಾರಿಗಳು ಕೂಡಲೇ ಕ್ರಮಕೈಗೊಳ್ಳಲು ಅಧ್ಯಕ್ಷರು ಸೂಚಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿರವರು ಮಾತನಾಡುತ್ತ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಪ್ರವೀಣ್.ಎನ್.ಎಂ)
ಸ.ಅ&ಕಾರ್ಯದರ್ಶಿ
ವಾರ್ಡ್-92, ಶಿವಾಜಿನಗರ(ಪ್ರಭಾರೆ)